**Akashvani : Bangalore**
**National Bulletin In Kannada**
**18.01.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.01.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. 'ಸ್ವಾಮಿತ್ವ' ಯೋಜನೆಯಡಿ ಆಸ್ತಿ ಮಾಲೀಕರಿಗೆ ೬೫ ಲಕ್ಷಕ್ಕೂ ಹೆಚ್ಚು ಆಸ್ತಿ ಕಾರ್ಡ್‌ಗಳನ್ನು ವಿತರಿಸಿದ ಪ್ರಧಾನಿ**

**೨.ಕೋಲ್ಕತ್ತಾ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಲೈಂಗಿಕ ದೌರ್ಜನ್ಯ, ಹತ್ಯೆ ಪ್ರಕರಣ; ತೀರ್ಪು ಪ್ರಕಟಿಸಿದ ನ್ಯಾಯಾಲಯ**

**೩.ನಾಳೆ ೧೧೮ನೇ ಆವೃತ್ತಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಭಾರತೀಯರನ್ನುದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ಮನದಾಳದ ಮಾತು**

**೪.ಖೋ ಖೋ ವಿಶ್ವಕಪ್; ಪುರುಷರ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತ-ದಕ್ಷಿಣಾ ಆಫ್ರಿಕಾ ಮುಖಾಮುಖಿ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು 'ಸ್ವಾಮಿತ್ವ' ಯೋಜನೆಯಡಿ ೬೫ ಲಕ್ಷಕ್ಕೂ ಹೆಚ್ಚು ಆಸ್ತಿಕಾರ್ಡ್‌ಗಳನ್ನು ಆಸ್ತಿ ಮಾಲೀಕರಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ವಿತರಿಸಿದರು. ಹತ್ತು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಲ್ಲಿನ ೫೦ ಸಾವಿರಕ್ಕೂ ಹೆಚ್ಚು ಹಳ್ಳಿಗಳಲ್ಲಿ ಆಸ್ತಿಕಾರ್ಡ್‌ಗಳನ್ನು ವಿತರಿಸಲಾಗಿದೆ. 'ಸ್ವಾಮಿತ್ವ' ಯೋಜನೆಯು, ಗ್ರಾಮಗಳಲ್ಲಿರುವ ಆಸ್ತಿ ಮಾಲೀಕರಿಗೆ ಹಕ್ಕುಗಳ ದಾಖಲೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಸುಧಾರಿತ ಡ್ರೋನ್ ತಂತ್ರಜ್ಞಾನದ ಮೂಲಕ ಸಮೀಕ್ಷೆ ನಡೆಸಿ, ಮನೆಗಳಿಗೆ ಹಕ್ಕುಗಳ ದಾಖಲೆಯನ್ನು ಒದಗಿಸುವ ಮೂಲಕ ಗ್ರಾಮೀಣ ಭಾರತದ ಆರ್ಥಿಕ ಅಭಿವೃದ್ಧಿಯನ್ನು ಹೆಚ್ಚಿಸಲು ೨೦೨೦ ರಲ್ಲಿ 'ಸ್ವಾಮಿತ್ವ' ಯೋಜನೆಯನ್ನು ಪ್ರಾರಂಭಿಸಲಾಯಿತು. ಈ ಯೋಜನೆಯು ಆಸ್ತಿ ಮಾರಾಟವನ್ನು ಸುಗಮಗೊಳಿಸುತ್ತದೆ. ಆಸ್ತಿ ಸಂಬಂಧಿತ ವಿವಾದಗಳನ್ನು ಕಡಿಮೆ ಮಾಡುತ್ತದೆ ಮತ್ತು ಆಸ್ತಿ ತೆರಿಗೆ ಸಂಗ್ರಹವನ್ನು ಬೆಂಬಲಿಸುತ್ತದೆ. ಇಲ್ಲಿವರೆಗೆ ೩ ಲಕ್ಷ ೧೭ ಸಾವಿರಕ್ಕೂ ಹೆಚ್ಚು

ಹಳ್ಳಿಗಳಲ್ಲಿ ಡ್ರೋನ್ ಮೂಲಕ ಆಸ್ತಿ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ೧ ಲಕ್ಷ ೫೦ ಸಾವಿರಕ್ಕೂ ಹೆಚ್ಚು ಹಳ್ಳಿಗಳಿಗೆ ಸುಮಾರು ೨ ಕೋಟಿ ೨೫ ಲಕ್ಷ ಆಸ್ತಿ ಕಾರ್ಡ್‌ಗಳನ್ನು ಸಿದ್ಧಪಡಿಸಲಾಗಿದೆ. ಸ್ವಾಮಿತ್ವ ಯೋಜನೆ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು, ಆಸ್ತಿ ಮಾಲೀಕರನ್ನು ಉದ್ದೇಶಿಸಿ ಮಾತನಾಡಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

**<><*<><>*><>**

ಕೋಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ವೈದ್ಯಕೀಯ ವಿದ್ಯಾರ್ಥಿನಿಯ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದಲ್ಲಿ ಸಂಜಯ್ ರೈ ಎಂಬಾತನನ್ನು ತಪ್ಪಿತಸ್ಥ ಎಂದು ಪಶ್ಚಿಮ ಬಂಗಾಳದ ಸಿಲ್ದಾ ನ್ಯಾಯಾಲಯವು ಇಂದು ತೀರ್ಪು ನೀಡಿದೆ. ಇದೇ ೨೦ ರ ಮುಂದಿನ ವಿಚಾರಣೆಯ ಸಮಯದಲ್ಲಿ ನ್ಯಾಯಾಲಯವು, ಅಪರಾಧಿಗೆ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಬಹುದು ಎಂದು ನಿರೀಕ್ಷಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ, ಸಲ್ಲಿಸಿದ ಪುರಾವೆಗಳು ಸಂಜಯ್ ರೈ ತಪ್ಪಿತಸ್ಥನೆಂದು ಸಾಬೀತುಪಡಿಸುತ್ತದೆ ಎಂದು ನ್ಯಾಯಾಧೀಶರು ತಿಳಿಸಿದ್ದಾರೆ. ಕಳೆದ ವರ್ಷ ಆಗಸ್ಟ್ ೯ ರಂದು ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿನಿಯ ಮೃತದೇಹ ಪತ್ತೆಯಾಗಿತ್ತು. ಆಗಸ್ಟ್ ೮ ಮತ್ತು ೯ ರ ಮಧ್ಯರಾತ್ರಿ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ಲೈಂಗಿಕ ದೌರ್ಜನ ಮತ್ತು ಹತ್ಯೆ ಮಾಡಲಾಗಿತ್ತು. ಆಗಸ್ಟ್ ೧೦ ರಂದು ಕೋಲ್ಕತ್ತಾ ಪೊಲೀಸರು ಸಂಜಯ್ ರೈ ನನ್ನು ಬಂಧಿಸಿದ್ದರು. ನಂತರ ಆತನನ್ನು ಸಿಬಿಐ ಗೆ ಹಸ್ತಾಂತರಿಸಲಾಗಿತ್ತು. ಈ ಪ್ರಕರಣದಲ್ಲಿ ಸಂಜಯ್ ರೈ ವಿರುದ್ಧ ಸಿಬಿಐ, ನ್ಯಾಯಾಲಯಕ್ಕೆ ಆರೋಪ ಪಟ್ಟಿಯನ್ನು ಸಲ್ಲಿಸಿತ್ತು.

**<><*<><>*><>**

ಜಗತ್ತಿನ ಅತಿದೊಡ್ಡ ಧಾರ್ಮಿಕ ಸಮಾರಂಭ-ಮಹಾಕುಂಭ ಮೇಳದಲ್ಲಿ ಭಾಗವಹಿಸಲು ಆಗಮಿಸುವ ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಲೇ ಇದೆ. ಕೊರೆಯುವ ಚಳಿ ಹಾಗೂ ಮಂಜು ಮುಸುಕಿದ ವಾತಾವರಣದ ನಡುವೆಯೂ, ಇದುವರೆಗೆ ೭ ಕೋಟಿಗೂ ಹೆಚ್ಚು ಭಕ್ತರು, ಪ್ರಯಾಗ್‌ರಾಜ್‌ನ ತ್ರಿವೇಣಿ ಸಂಗಮದ ತೀರ್ಥ ಸ್ನಾನದಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದಾರೆ. ಜನವರಿ ೧೩ರಿಂದ ಆರಂಭವಾದ ಮಹಾಕುಂಭ ಮೇಳ, ಫೆಬ್ರವರಿ ೨೬ ರ ಮಹಾಶಿವರಾತ್ರಿಯಂದು ಸಂಪನ್ನಗೊಳ್ಳಲಿದೆ. ಒಟ್ಟು ೪೫ ದಿನಗಳವರೆಗೆ ಮಹಾಕುಂಭ ಮೇಳ ಜರುಗಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಿ ಪೂಜೆ ಸಲ್ಲಿಸಿದರು. ಬಳಿಕ ಮಾತನಾಡಿ ಅವರು, ಕುಂಭಮೇಳವು ಪ್ರಾಚೀನ ವೈದಿಕ ಖಗೋಳ ಘಟನೆಯನ್ನು ಆಧರಿಸಿದ, ಭಾರತೀಯ ಸಂಸ್ಕೃತಿ ಮತ್ತು ಸನಾತನ ಧರ್ಮದ ಆಧ್ಯಾತ್ಮಿಕ ಅನುಭವದ ಹಬ್ಬವಾಗಿದೆ. ಆಧ್ಯಾತ್ಮಿಕತೆಯ ಜೊತೆಗೆ, ವೈಜ್ಞಾನಿಕ ಹಾಗೂ ಸಾಮಾಜಿಕ ಸಾಮರಸ್ಯದ

ಸಂಕೇತವಾಗಿರುವ ಗಂಗಾ, ಯಮುನಾ ಮತ್ತು ಸರಸ್ವತಿಯ ಸಂಗಮವಾಗಿದೆ ಎಂದು ಹೇಳಿದರು. ವಿಶ್ವದ ಅತಿದೊಡ್ಡ ಸಾರ್ವಜನಿಕ ಮೇಳವನ್ನು ಸಮರ್ಥವಾಗಿ ನಡೆಸಿದ್ದಕ್ಕಾಗಿ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಇದೇ ವೇಳೆ ರಾಜನಾಥ್ ಸಿಂಗ್ ಅಭಿನಂದಿಸಿದರು.

**<><*<><>*><>**

ಭಾರತೀಯ ಆಟೋಮೊಬೈಲ್ ಕ್ಷೇತ್ರವು ಪರಿಸರ ಸ್ನೇಹಿ ಹೆಜ್ಜೆಗಳ ಮೂಲಕ ಸುರಕ್ಷಿತ, ದಕ್ಷತೆ ಹಾಗೂ ಕ್ಷಮತೆಯ ಭವಿಷ್ಯಕ್ಕೆ ನಾಂದಿ ಹಾಡಿದ್ದು, ಮುಂಬರುವ ದಿನಗಳಲ್ಲಿ ದೇಶೀಯ ವಾಹನ ಕ್ಷೇತ್ರವು ಅದ್ಭುತಗಳಿಗೆ ಸಾಕ್ಷಿಯಾಗಲಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ಭಾರತೀಯ ವಾಹನ ಮಾರಾಟಗಾರರ ಫೆಡರೇಶನ್ ಆಯೋಜಿಸಿದ್ದ ೧೩ನೇ ವಾಹನ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಹಸಿರು, ಸುರಕ್ಷಿತ ಮತ್ತು ಹೆಚ್ಚು ಪರಿಣಾಮಕಾರಿ ಭವಿಷ್ಯವನ್ನು ರೂಪಿಸುವಲ್ಲಿ ಭಾರತದ ವಾಹನ ಕ್ಷೇತ್ರದ ಪರಿವರ್ತಕ ಪಾತ್ರ ವಹಿಸುತ್ತಿದೆ ಎಂದರು. ವಾಹನ ಕ್ಷೇತ್ರವು ಅತ್ಯುತ್ತಮ ಬೆಳವಣಿಗೆ ದರವನ್ನು ದಾಖಲಿಸಿದೆ. ಚಿಲ್ಲರೆ ಮಾರುಕಟ್ಟೆಯಲ್ಲಿ ೨೦೨೪ರಲ್ಲಿ ಭಾರತವು ೨೬.೧ ದಶಲಕ್ಷ ವಾಹನಗಳನ್ನು ಮಾರಾಟ ಮಾಡಿದೆ. ವರ್ಷದಿಂದ ವರ್ಷಕ್ಕೆ ಸರಾಸರಿ ಶೇಕಡ ೯ ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ ಎಂದು ತಿಳಿಸಿದರು. ಜಾಗತಿಕ ಮಟ್ಟದಲ್ಲಿ ನಿರಂತರ ಅನಿಶ್ಚಿತತೆಯ ಹೊರತಾಗಿಯೂ ಭಾರತೀಯ ವಾಹನೋದ್ಯಮವು ಸುಸ್ಥಿರವಾಗಿ ಅಭಿವೃದ್ಧಿ ಹೊಂದುತ್ತಿದೆ. ಸಾಂಪ್ರದಾಯಿಕ ಮತ್ತು ಎಲೆಕ್ಟ್ರಿಕ್ ವಾಹನ ಎರಡರಲ್ಲೂ ಗಮನಾರ್ಹ ಮೈಲಿಗಲ್ಲುಗಳನ್ನು ಸಾಧಿಸುತ್ತಿದೆ. ಇದು ಅತ್ಯಂತ ಹರ್ಷದಾಯಕ ಸಂಗತಿ ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

**<><*<><>*><>**

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬೆಂಗಳೂರಿನಲ್ಲಿಂದು, ಕೃಷಿ, ಗ್ರಾಮೀಣ ಮತ್ತು ಕಂದಾಯ ಸಚಿವರೊಂದಿಗೆ ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ, ಸಚಿವರಾದ ಎನ್.ಚೆಲುವರಾಯಸ್ವಾಮಿ, ಪ್ರಿಯಾಂಕ್ ಖರ್ಗೆ, ಕೃಷ್ಣ ಬೈರೇಗೌಡ, ಸಂಸದ ಬಿ.ವೈ.ರಾಘವೇಂದ್ರ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಬಳಿಕ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ಕರ್ನಾಟಕದ ವಿಕಾಸಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಈಗಾಗಲೇ ಬಿಡುಗಡೆ ಮಾಡಿರುವ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಪ್ರತಿ ಬಡವರಿಗೂ ಮನೆ ಸಿಗಬೇಕು ಎನ್ನುವುದು ಪ್ರಧಾನಿ ಅವರ ಸಂಕಲ್ಪವಾಗಿದೆ. ಈ ಹಿನ್ನೆಲೆಯಲ್ಲಿ, ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ, ಕರ್ನಾಟಕಕ್ಕೆ ೨ ಲಕ್ಷ ೫೭ ಸಾವಿರದ ೨೪೬ ಮನೆಗಳ ನಿರ್ಮಾಣಕ್ಕೆ

ಒಪ್ಪಿಗೆ ನೀಡಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಬಡಜನರಿಗಾಗಿ ಮನೆ ನಿರ್ಮಾಣ ಮಾಡುವ ಗುರಿಯನ್ನು ಈಗ ೪ ಲಕ್ಷ  ೬೭ ಸಾವಿರದ ೫೮೦ಕ್ಕೆ ಹೆಚ್ಚಿಸಲಾಗಿದೆ. ವಿಕಸಿತ ಭಾರತ ಕನಸು ನನಸಾಗಿಸಲು, ಕರ್ನಾಟಕ ಕೂಡ ವಿಕಸಿತವಾಗಬೇಕು ಎಂದು ಹೇಳಿದರು. ಸಚಿವ ಕೃಷ್ಣ ಬೈರೇಗೌಡ ಮಾತನಾಡಿ, ಕೇಂದ್ರ ಸಚಿವರೊಂದಿಗೆ ನಡೆದ ಸಭೆಯಲ್ಲಿ  ಭೂ ಸಂಪನ್ಮೂಲ ಇಲಾಖೆ ಮತ್ತು ಕೇಂದ್ರ ಸರ್ಕಾರದ  ಆ|ಐ ಖಬP, ಸ್ವಾಮಿತ್ವ ಯೋಜನೆ ಸೇರಿದಂತೆ, ಭೂ ಆಡಳಿತದ ಹಲವು ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗಿದೆ.  ರಾಜ್ಯದ ಕಾರ್ಯಕ್ಷಮತೆ ಆಧಾರದ ಮೇಲೆ ರಾಜ್ಯಕ್ಕೆ ಅರ್ಹವಾದ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.  ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೮ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ.  ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

**<><*<><>*><>**

ಅಪರಾಧ ತನಿಖೆಗಳಲ್ಲಿ ಸೈಬರ್ ಬೆದರಿಕೆ ಮತ್ತು ಡಿಜಿಟಲ್ ವಿಧಿ ವಿಜ್ಞಾನ ಕುರಿತು ಮಾಹಿತಿಯನ್ನು ಪರಸ್ಪರ ಹಂಚಿಕೆಗಾಗಿ ಭಾರತ ಹಾಗೂ ಅಮೆರಿಕ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ.  ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾತ್ರಾ ಮತ್ತು ಅಮೆರಿಕದ ಗೃಹ ಇಲಾಖೆಯ ಉಪ ಕಾರ್ಯದರ್ಶಿ ಕ್ರಿಸ್ಟಿ ಕ್ಯಾನೆಗಲ್ಲೊ ಈ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**<><*<><>*><>**

ಭಾರತದ ರಾಷ್ಟ್ರೀಯ ಇಂಟರ್ನೆಟ್ ವಿನಿಮಯ ಕೇಂದ್ರವು, ಇಂಟರ್ನೆಟ್ ಆಡಳಿತ ಇಂಟರ್ನ್‌ಶಿಪ್ ಮತ್ತು ಸಾಮರ್ಥ್ಯ ನಿರ್ಮಾಣ ಯೋಜನೆಯನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ.  ಈ ಕಾರ್ಯಕ್ರಮವು ಎರಡು

ಹಂತಗಳಲ್ಲಿ; ಆರು ತಿಂಗಳು ಹಾಗೂ ಮೂರು ತಿಂಗಳ ದ್ವೈವಾರ್ಷಿಕ ಇಂಟರ್ನ್‌ಶಿಪ್ ಒದಗಿಸುತ್ತದೆ. ಇದರಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬರಿಗೂ ಅಂತಾರಾಷ್ಟ್ರೀಯ ಸಂಸ್ಥೆಗಳ ವಿಷಯ ತಜ್ಞರು, ವಿಶೇಷ ಆಸಕ್ತಿ ಗುಂಪುಗಳ ಸದಸ್ಯರು, ಉನ್ನತ ಶ್ರೇಣಿಯ ನಿವೃತ್ತ ಸರ್ಕಾರಿ ಅಧಿಕಾರಿಗಳು ಮತ್ತು ಮಾನ್ಯತೆ ಪಡೆದ ಸಂಸ್ಥೆಗಳ ಸಲಹೆಗಾರರಿಂದ ಮಾರ್ಗದರ್ಶನ ನೀಡುವುದು. ಅಲ್ಲದೇ, ಇಂಟರ್ನ್‌ಗಳಿಗೆ ತಿಂಗಳಿಗೆ ೧೦ ಸಾವಿರ ರೂಪಾಯಿಗಳ ಶಿಷ್ಯವೇತನ ಸಹ ನೀಡಲಾಗುವುದು ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ. ಅಭ್ಯರ್ಥಿಗಳು, ಭಾರತದ ರಾಷ್ಟ್ರೀಯ ಇಂಟರ್ನೆಟ್ ವಿನಿಮಯ ಕೇಂದ್ರದ ಅಧಿಕೃತ ವೆಬ್‌ಸೈಟ್ ಮೂಲಕ ಇಂಟರ್ನ್‌ಶಿಪ್‌ಗೆ ಅರ್ಜಿ ಸಲ್ಲಿಸಬಹುದು.

**<><*<><>*><>**

೨೦೨೫ ರ ಖೋ ಖೋ ವಿಶ್ವಕಪ್‌ನಲ್ಲಿ, ಭಾರತೀಯ ಪುರುಷ ಮತ್ತು ಮಹಿಳಾ ತಂಡಗಳು ಇಂದು ಸೆಮಿಫೈನಲ್‌ನಲ್ಲಿ ಸ್ಪರ್ಧಿಸಲಿವೆ. ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ಮಹಿಳಾ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ. ನಂತರ ಇದೇ ಕ್ರೀಡಾಂಗಣದಲ್ಲಿ ರಾತ್ರಿ ನಡೆಯಲಿರುವ ಪುರುಷರ ಸೆಮಿಫೈನಲ್ ಪಂದ್ಯದಲ್ಲಿ ಭಾರತ ತಂಡವು, ದಕ್ಷಿಣ ಆಫ್ರಿಕಾ ತಂಡವನ್ನು ಎದುರಿಸಲಿದ್ದು, ಪಂದ್ಯ ರಾತ್ರಿ ೮:೧೫ ಕ್ಕೆ ಪ್ರಾರಂಭವಾಗಲಿದೆ.

**<><*<><>*><>**

ಮುಂಬರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ೨೦೨೫ ಮತ್ತು ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಗಾಗಿ ಬಿಸಿಸಿಐ, ೧೫ ಆಟಗಾರರ ತಂಡವನ್ನು ಪ್ರಕಟಿಸಿದೆ. ಕುಲದೀಪ್ ಯಾದವ್, ಜಸ್ಪ್ರೀತ್ ಬುಮ್ರಾ ಮತ್ತು ಮೊಹಮ್ಮದ್ ಶಮಿ ಭಾರತದ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಫೆಬ್ರವರಿ ೧೯ ರಂದು ಪ್ರಾರಂಭವಾಗುವ ಚಾಂಪಿಯನ್ಸ್ ಟ್ರೋಫಿಗಾಗಿ ತಂಡವು ದುಬೈಗೆ ಹೋಗುವ ಮೊದಲು ಭಾರತ, ಫೆಬ್ರವರಿ ೬, ೯ ಮತ್ತು ೧೨ ರಂದು ಇಂಗ್ಲೆಂಡ್ ವಿರುದ್ಧ ಮೂರು ಏಕದಿನ ಪಂದ್ಯಗಳನ್ನು ಆಡಲಿದೆ. ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ, 'ಎ' ಗುಂಪಿನಲ್ಲಿದ್ದು, ಫೆಬ್ರವರಿ ೨೦ ರಂದು ಬಾಂಗ್ಲಾದೇಶ ವಿರುದ್ಧ ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದೆ. ನಂತರ ಫೆಬ್ರವರಿ ೨೩ ರಂದು ಪಾಕಿಸ್ತಾನ ಮತ್ತು ಮಾರ್ಚ್ ೨ ರಂದು ನ್ಯೂಜಿಲೆಂಡ್ ವಿರುದ್ಧ ಆಡಲಿದೆ. ಭಾರತ ತನ್ನ ಎಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಲಿದೆ.

**<>*><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><*<>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <><*<>**